**<u>ಸಾಕ್ಷಿಗೆ ದಿಃ 03.04.2025 ರಂದು ಪ್ರಮಾಣ ವಚನ ಭೋದಿಸಲಾಯಿತು</u>**

**<u>ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ವಿಸಿ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯನ್ನು ಶಪಥ ಪತ್ರದ ಮುಖಾಂತರ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳು ಸರಿ ಇರುತ್ತದೆ. ದಿಃ29.09.2023 ರಂದು ನನ್ನ ಅಕ್ಕನಾದ ಅಕ್ಕಮ್ಮರವರು ಬರೆದ ನೊಂದಾಯಿತ ಮೃತ್ಯು ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರ್ತಿಸಲಾಯಿತು. ಅಕ್ಕಮ್ಮ ಇವರ ಮರಣ ಪ್ರಮಾಣ ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು ಗುರ್ತಿಸಲಾಯಿತು. ನನ್ನ ಆಧಾರ್ ಕಾರ್ಡ್ ನ ಪ್ರತಿಯನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು ಗುರ್ತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಪಟ್ಟ ಪಹಣಿ ನೋಡಿ ಗುರುತಿಸಿದ್ದು ನಿಪಿ-4 ಎಂದು ಗುರುತಿಸಲಾಯಿತು. ವಂಶವೃಕ್ಷವನ್ನು ನೋಡಿ ಗುರುತಿಸಿದ್ದು ನಿಪಿ-5 ಎಂದು ಗುರುತಿಸಲಾಯಿತು. ಈ ಅರ್ಜಿಯನ್ನು ಸಲ್ಲಿಸಿದ ನಂತರ ಸಂಯುಕ್ತ ಕರ್ನಾಟಕದಲ್ಲಿ ನೀಡಿದ ಪೇಪರ್ ಪಬ್ಲಿಕೇಷನ್ ನೋಡುತ್ತಿದ್ದು ಅದನ್ನು ನಿಪಿ-6 ಎಂದು ಗುರ್ತಿಸಲಾಯಿತು.

**<u>ಪಾಟೀ ಸವಾಲುಃ</u>** ನಿಪಿ-6 ನೋಟಿಸಿನ ಪ್ರಕಾರ ಯಾವುದೇ ಎದುರುದಾರರು ಹಾಜರಾಗದೇ ಇದ್ದ ಕಾರಣ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಯಥಾವತ್ತಾಗಿ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

(ಕೆ. ಗುರುಪ್ರಸಾದ್)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.